ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 17ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

ದಿನಾಂಕ: 10.03.2021ರ 8ನೇ ಪಟ್ಟಿಯಿಂದ ತಡೆಹಿಡಿಯಲಾದ

1) ಶ್ರೀ ಬಿ.ಎಂ. ಸುಕುಮಾರ್ ಶೆಟ್ಟಿ, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 106(1664)
2) ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:108(1449)
3) ಶ್ರೀ ಅಮೃತ ಅಯ್ಯಪ್ಪ ದೇಸಾಯಿ, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:111(1403)
4) ಶ್ರೀ ವೆಂಕಟರಮಣಯ್ಯ ಟಿ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:113(1622)
5) ಶ್ರೀ ರಘುಪತಿ ಭಟ್ ಕೆ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:118(1510)
6) ಶ್ರೀ ವೆಂಕಟರೆಡ್ಡಿ ಮುದ್ನಾಳ್, ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:120(1642)

} ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

2. ಚುನಾವಣಾ ಪ್ರಸ್ತಾವ

ಶ್ರೀ ಬಸವರಾಜ್ ಬೊಮ್ಮಾಯಿ (ಮಾನ್ಯ ಗೃಹ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) ಅವರು:-

ಕನ್ನಡ ವಿಶ್ವವಿದ್ಯಾಲಯದ ಆಡಳಿತ ಮಂಡಳಿ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ಡಾ:ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗಳಿಗೆ ತಲಾ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಬಂಡೆಪ್ಪ ಖಾಶೆಂಪೂರ್, ಕೆ.ಎಂ. ಶಿವಲಿಂಗೇಗೌಡ, ಆರ್. ಮಂಜುನಾಥ್ ಹಾಗೂ ಇತರರು** – ಮಾಯನೂರು ಜಲಾಶಯವನ್ನು ಗುಂಡಾರು, ದಕ್ಷಿಣ ವೆಲ್ಲೂರು ಮತ್ತು ವೈಗಾಯಿ ನದಿಗಳೊಂದಿಗೆ ಜೋಡಣೆ ಮಾಡುವ ನಿರ್ಮಾಣ ಕಾರ್ಯದಿಂದಾಗಿ ಉಂಟಾಗಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಅಶ್ವಿನ್ ಕುಮಾರ್ ಎಂ. ಹಾಗೂ ಇತರರು** – ರಾಜ್ಯದಲ್ಲಿ ಸ್ಥಗಿತಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಒದಗಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

..3/

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಕೃಷ್ಣ ಜಲಾನಯನ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ನಿರಸನಗೊಳಿಸುವ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಸಿ.ಎಂ. ನಿಂಬಣ್ಣವರ್ ಅವರು** – ದಾಂಡೇಲಿ-ಧಾರವಾಡ-ಹೆಬಸೂರ-ನವಲಗುಂದ ಅಣ್ಣಿಗೇರಿವರೆಗಿನ ರಾಜ್ಯ ಹೆದ್ದಾರಿಯಲ್ಲಿ ರೈಲ್ವೇ ಗೇಟ್‌ಗೆ ಮೇಲ್ಸೇತುವೆ ನಿರ್ಮಿಸಿ, ರಾಜ್ಯ ಹೆದ್ದಾರಿಯನ್ನು ಉನ್ನತೀಕರಿಸಿ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಅಭಿವೃದ್ಧಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ) ಗಮನ ಸೆಳೆಯುವುದು.

2) **ಶ್ರೀ ಪ್ರಿಯಾಂಕ್ ಖರ್ಗೆ ಅವರು** – ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮೇದಕ ಗ್ರಾಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನಗಳನ್ನು ಉಲ್ಲಂಘಿಸಿರುವ ರಾಯಲ್ ಫ್ಯಾಮಿಲಿ ರಿಕ್ರಿಯೇಷನ್ ಮತ್ತು ಕಲ್ಚರಲ್ ಕ್ಲಬ್ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

3) **ಶ್ರೀ ಹೆಚ್.ಹಾಲಪ್ಪ ಅವರು** – ಸಾಗರ ಹಾಗೂ ಹೊಸ ನಗರ ತಾಲ್ಲೂಕುಗಳ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ನೆಟ್ ವರ್ಕ್ ಸಂಪರ್ಕ ಇಲ್ಲದಿರುವುದರಿಂದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲದ ಬಗ್ಗೆ ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುವ ಬಿಲ್ ಕಲೆಕ್ಟರ್‌ಗಳು ಕರ್ತವ್ಯ ನಿರ್ವಹಣೆಗಿಂತ ಹೆಚ್ಚಿನ ಸಮಯವನ್ನು ರಾಜಕೀಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದರಿಂದ ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

5) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ್ ಅವರು** – ಅಮಟೂರ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಮರು ಆರಂಭಿಸಲು ಪ್ರಧಾನ ಮಂತ್ರಿಗಳ ಜಲ್ ಜೀವನ್ ಮಿಷನ್ ಅಥವಾ ರಾಜ್ಯ ಸರ್ಕಾರದ ಬಂಡವಾಳದಲ್ಲಿ ಆರ್ಥಿಕ ನೆರವು ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

6) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮಂಗಳೂರು ಮಹಾನಗರ ಪಾಲಿಕೆ ಹಾಗೂ ಇತರೆ ಎಲ್ಲಾ ಬಳಕೆದಾರರಿಗೆ ನೀರಿನ ಕೊರತೆಯಾಗದ ರೀತಿ ನೀರನ್ನು ಸಂಗ್ರಹಿಸುವುದರಿಂದ ಮುಳುಗಡೆಯಾಗುವ ಪ್ರದೇಶಕ್ಕೆ ಭೂ ಪರಿಹಾರ ನೀಡಲು ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಚುನಾವಣಾ ನೀತಿ ಸಂಹಿತೆಯ ಕಾರಣದಿಂದ ಫಾರಂ ನಂ.57 ರ ಅರ್ಜಿಗಳು ಅಪ್‌ಲೋಡ್ ಆಗದಿರುವ ಬಗ್ಗೆ ಹಾಗೂ ಅಪ್‌ಲೋಡ್ ಆದಂತಹ ಅರ್ಜಿಗಳು ವಿಲೇವಾರಿ ಆಗದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ವೈ. ನಂಜೇಗೌಡ ಅವರು** – ಗಂಗಾಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ಪಂಪ್ ಮೋಟಾರ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಹಾಗೂ ಸಂಪರ್ಕವನ್ನು ಕಲ್ಪಿಸಲು ವಿಳಂಬ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ಗೌರಿಬಿದನೂರು ತಾಲ್ಲೂಕಿನಲ್ಲಿ ಶಿಥಿಲಗೊಂಡಿರುವ ನ್ಯಾಯಾಲಯ ಕಟ್ಟಡವನ್ನು ಹೊಸದಾಗಿ ನಿರ್ಮಿಸುವ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

10) **ಶ್ರೀ ವಿ. ಮುನಿಯಪ್ಪ ಅವರು** – ಹೆಚ್.ಎನ್. ವ್ಯಾಲಿ ಯೋಜನೆಯಡಿ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೆರೆಗಳಿಗೆ ನೀರನ್ನು ತುಂಬಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಟಿ.ಡಿ. ರಾಜೇಗೌಡ ಅವರು** – ಸೊಪ್ಪಿನಬೆಟ್ಟ ಸಮಸ್ಯೆಯಡಿ ಜಮೀನುಗಳನ್ನು ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ರೈತರು ನಮೂನೆ–50, 53ರಲ್ಲಿ ಸಲ್ಲಿಸಿರುವ ಅರ್ಜಿಗಳ ಬಗ್ಗೆ ಅರ್ಹತೆ ಆಧಾರದ ಮೇರೆಗೆ ತೀರ್ಮಾನ ಕೈಗೊಳ್ಳಲು ಹಾಗೂ ಆ ಪ್ರದೇಶಗಳಲ್ಲಿ ಒತ್ತುವರಿಯನ್ನು ತೆರವುಗೊಳಿಸದಂತೆ ಕ್ರಮಕೈಗೊಳ್ಳುವ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು** – ವಿಶ್ವವಿದ್ಯಾಲಯದ ಇ–ಅಟೆಸ್ಟೇಷನ್ ಅಧಿಕಾರಿಗಳು ಮಾಹಿತಿಯನ್ನು ಸರಿಯಾಗಿ ಭರ್ತಿ ಮಾಡದ ಕಾರಣ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನವನ್ನು ಪಡೆಯಲು ಉಂಟಾಗುತ್ತಿರುವ ಸಮಸ್ಯೆಯ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

13) **ಶ್ರೀ ಆರ್. ಮಂಜುನಾಥ್ ಅವರು** – ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಬಿಬಿಎಂಪಿ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿ ಕಾಮಗಾರಿಯಿಂದಾಗಿ ಹಾಳಾಗಿರುವ ರಸ್ತೆಗಳನ್ನು ದುರಸ್ತಿಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

14) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ನಗರದಲ್ಲಿರುವ ಸರ್ಕಾರಿ ಬಿ.ಎಡ್. ಕಾಲೇಜ್‌ಗೆ ಸಿಬ್ಬಂದಿ ಮತ್ತು ಮೂಲಸೌಕರ್ಯವನ್ನು ಒದಗಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

15) **ಶ್ರೀ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು** – ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶಿಕ್ಷಕರನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

16) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ತಾಲ್ಲೂಕು ಕಟ್ಟಾಯ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

17) **ಶ್ರೀ ಟಿ. ರಘುಮೂರ್ತಿ ಅವರು** – ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಾಣಿಕೆರೆ ಗ್ರಾಮದಲ್ಲಿ ಒಣ ಬೇಸಾಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಸ್ಥಾಪಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

18) **ಶ್ರೀ ಉದಯ್ ಬಿ. ಗರುಡಾಚಾರ್ ಅವರು** – ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಲಾಸಿಪಾಳ್ಯದಲ್ಲಿ ನಡೆಯುತ್ತಿರುವ ಆಧುನಿಕ ಬಸ್ ಟರ್ಮಿನಲ್ ಕಟ್ಟಡದ ನಿರ್ಮಾಣ ಕಾಮಗಾರಿಯ ವಿಳಂಬದಿಂದಾಗಿ ಸಾರ್ವಜನಿಕರಿಗೆ ಉಂಟಾಗಿರುವ ಅನಾನುಕೂಲಗಳ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಸಾರಿಗೆ) ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm